ಅ) 82,35,428

ನ್ಯಾಯಬೆಲೆ ಅಂಗಡಿಗಳ ಆಹಾರ ಪದಾರ್ಥಗಳ ಸಮರ್ಪಕ ಹಂಚಿಕೆಯ ಬಗ್ಗೆ ಸಮಿತಿಗಳ ರಚನೆ.

316. ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ನ್ಯಾಯಬೆಲೆ ಅಂಗಡಿಗಳ ಆಹಾರ ಪದಾರ್ಥಗಳ ಸಮರ್ಪಕ ಹಂಚಿಕೆ ವ್ಯವಸ್ಥೆಗೆ ಸಲಹಾ ಸಮಿತಿಗಳನ್ನು ರಚಿಸಲು ಸರ್ಕಾರವು ನಿರ್ಧರಿಸಿದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):–

– ಹೌದು –

ಬೈಲಹೊಂಗಲ ತಾಲ್ಲೂಕಿನಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸು ಷೆಲ್ಟರ್ಸ್.

320. ಶ್ರೀ. ಶಿವಾನಂದ ಹೆಚ್. ಕೌಜಲಗಿ (ಬೈಲ ಹೊಂಗಲ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರು ಸಂಗೊಳ್ಳಿ ಮತ್ತು ಸೌದತ್ತಿ ತಾಲ್ಲೂಕಿನ ಸುತ್ತಗಟ್ಟಿ ಮತ್ತು ಹಿಟ್ಟಣಗಿ ಗ್ರಾಮಗಳಲ್ಲಿ ಬಸ್ ಶೆಲ್ಟರ್ ಇಲ್ಲದೇ ಇರುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

2) ಹಾಗಿದ್ದಲ್ಲಿ ಕೆ.ಎಸ್.ಆರ್.ಟಿ.ಸಿ. ಮಾರ್ಗ ತಂಗುದಾಣವನ್ನು (ಚಿಕ್ಕದಾದ ವೇ ಬಸ್ ಶೆಲ್ಟರ್) ಆ ಸ್ಥಳಗಳಲ್ಲಿ ಕಟ್ಟುವ ಬಗ್ಗೆ ಕ್ರಮ ಕೈಗೊಳ್ಳುವರೆ ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

1) – ಹೌದು –

2) ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಬೈಲಹೊಂಗಲ ಕೆ.ಎಸ್.ಆರ್.ಟಿ.ಸಿ. ಡಿಪೋನಿಂದ ಬೆಳಗಾವಿಗೆ ಸೂಪರ್ ಡಿಲಕ್ಸ್ ಸಾರಿಗೆ ಸಂಚಾರವನ್ನು ಪ್ರಾರಂಭಿಸುವುದು.

321. ಶ್ರೀ. ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

ಅ) ಬೈಲಹೊಂಗಲ ಕೆ.ಎಸ್.ಆರ್.ಟಿ.ಸಿ. ಡಿಪೋನಿಂದ ಬೆಳಗಾಂಗೆ ಸೂಪರ್ ಡಿಲಕ್ಸ್ ಸಾರಿಗೆ ಸಂಚಾರವನ್ನು ಕೈಗೊಳ್ಳಲು ಸರ್ಕಾರದವರು ಕ್ರಮ ಕೈಗೊಳ್ಳುವರೆ ?

ಆ) ಬೆಳಗಾವಿ ಜಿಲ್ಲೆ ಹೆಡ್‌ಕ್ವಾರ್ಟರ್ಸ್ ಇದ್ದು ಪ್ರತಿದಿವಸ ಪ್ರವಾಸಿಗರು ಬೈಲಹೊಂಗಲದಿಂದ ಬೆಳಗಾಂಗೆ ಹೋಗುತ್ತಿದ್ದು ಈಗ ಅವರಿಗೆ ಕೇವಲ ರೆಗ್ಯುಲರ್ ಬಸ್‌ಗಳಿದ್ದು ಸೂಪರ್ ಡಿಲಕ್ಸ್ ಬಸ್‌ಗಳು ಇಲ್ಲದೇ ಇರುವುದರಿಂದ ಅವುಗಳನ್ನು ಸಂಚಾರಕ್ಕೆ ಬಿಡಲು ಕ್ರಮ ಕೈಗೊಳ್ಳುವರೆ ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

ಅ) – ಇಲ್ಲ –

ಆ) ಉದ್ಭವಿಸುವುದಿಲ್ಲ.

ವಿಶ್ವವಿದ್ಯಾನಿಲಯಗಳಲ್ಲಿ ಕಾಲೇಜು ಮಟ್ಟದಲ್ಲಿಯೇ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

322. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ):– ಮಾನ್ಯ ಶಿಕ್ಷಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ವಿಶ್ವವಿದ್ಯಾಲಯದವರು ಪರೀಕ್ಷೆಗಳನ್ನು ಪ್ರತಿಯೊಂದು ಕಾಲೇಜು ಮಟ್ಟದಲ್ಲಿಯೇ ನಡೆಸಬೇಕೆಂದು ತೆಗೆದುಕೊಂಡ ನಿರ್ಣಯವು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ರಾಜ್ಯದಲ್ಲಿ ಯಾವ್ಯಾವ ವಿಶ್ವವಿದ್ಯಾಲಯಗಳು ಕಾಲೇಜು ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸಬೇಕೆಂದು ತೀರ್ಮಾನಿಸಿವೆ ?

ಇ) ಕಾಲೇಜು ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸುವುದರಿಂದ ವಿದ್ಯಾರ್ಥಿಗಳ ಗುಣಮಟ್ಟ ಕಡಿಮೆ ಆಗುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ, ಮೊದಲಿನಂತೆ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ವಿಶ್ವವಿದ್ಯಾಲಯದವರೇ ಪರೀಕ್ಷೆಗಳನ್ನು ನಡೆಸಲು ಸರ್ಕಾರದವರು ಆದೇಶ ನೀಡುವರೆ ?

ಶ್ರೀ ಎಸ್. ಎಂ. ಯಾಹ್ಯಾ (ಶಿಕ್ಷಣ ಮತ್ತು ವಕ್ಫ್ ಸಚಿವರು):–

ಅ) ದಿನಾಂಕ 2–11–92ರ ಬೆಂಗಳೂರು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ 1976ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದ 12 (5) ನೇ ಪ್ರಕರಣದಲ್ಲಿ ನಿಹಿತವಾದ ಅಧಿಕಾರಗಳನ್ನು ಚಲಾಯಿಸಿ ಉಪಕುಲಪತಿಗಳ ಅನುಮೋದನೆ ಪಡೆದು ಬಿ.ಎ: ಬಿ.ಎಸ್ಸಿ: ಬಿ.ಕಾಂ ಮೊದಲನೆ ವಾರ್ಷಿಕ ಪರೀಕ್ಷೆಗಳನ್ನು ಅನುಕ್ರಮವಾಗಿ ಕಾಲೇಜಿನ ಮಟ್ಟದಲ್ಲೇ ನಡೆಸಲು ರೆಗ್ಯುಲೇಷನ್‌ನನ್ನು ತಿದ್ದುಪಡಿ ಮಾಡಲಾಗಿತ್ತು.

ಮೇಲ್ಕಂಡ ಅಧಿಸೂಚನೆಯನ್ನು ಅಬೆಯನ್ಸ್‌ನಲ್ಲಿ ಇಡಲಾಗಿದ್ದು, ಕಾಲೇಜು ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸುವ ಪ್ರಸ್ತಾವವನ್ನು ಮುಂದೂಡಲಾಗಿದೆ.

ಆ) ಯಾವುದೂ ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ತ್ರಿವರ್ಣ ಹಾಗೂ ಕೇಸರಿ ಕಾರ್ಡುಗಳ ಸಂಖ್ಯೆ.

677. ಶ್ರೀ ಮಂಜುನಾಥ ಕುನ್ನೂರ, (ಶಿಗ್ಗಾಂವ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ರಾಜ್ಯದಲ್ಲಿ ಇದುವರೆವಿಗೆ ವಿತರಿಸಲಾಗಿರುವ ತ್ರಿವರ್ಣ ಹಾಗೂ ಕೇಸರಿ ಕಾರ್ಡುಗಳ ಸಂಖ್ಯೆ ಎಷ್ಟು ?